ಇ) ಇನ್ನೆಷ್ಟು ದಿನಗಳಲ್ಲಿ ಸ್ವಂತ ಕಟ್ಟಡದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಪ್ರಾರಂಭಿಸಲಾಗುವುದು;

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು, ಅಂದಾಜು ವೆಚ್ಚ ರೂ. 4.7 ಕೋಟಿ ಇರುತ್ತದೆ.

ಇ) ಮೇ 2011 ರ ಅಂತ್ಯಕ್ಕೆ ಕಾಮಗಾರಿಗಳನ್ನು ಪೂರ್ಣಗೊಳಿಸಿ ವಸತಿ ಶಾಲೆಯನ್ನು ಸ್ವಂತ ಕಟ್ಟಡಕ್ಕೆ ವರ್ಗಾಯಿಸಲಾಗುವುದು.

ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಮತ್ತು ಶೌಚಾಲಯಗಳನ್ನು ನಿರ್ಮಿಸುವುದು

470 (747) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಸ್ವಂತ ಕಟ್ಟಡಗಳ ಅವಶ್ಯಕತೆಯಿರುವ ಅಂಗನವಾಡಿ ಕಟ್ಟಡಗಳೆಷ್ಟು; ಶೌಚಾಲಯಗಳ ಅವಶ್ಯಕತೆಯಿರುವ ಅಂಗನವಾಡಿಗಳೆಷ್ಟು;

ಆ) ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಮತ್ತು ಶೌಚಾಲಯ ನಿರ್ಮಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಇ) ಈ ವರ್ಷದ ಅನುದಾನದಲ್ಲಿ ಈ ಕಾಮಗಾರಿಗಳಿಗೆ ಹಣ ಕಾಯ್ದಿರಿಸಲಾಗುವುದೇ;

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ 232 ಕೇಂದ್ರಗಳಿಗೆ ಸ್ವಂತ ಕಟ್ಟಡಗಳಿರುತ್ತವೆ ಉಳಿದ 100 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳ ಅವಶ್ಯಕತೆ ಇರುತ್ತವೆ. 191 ಕೇಂದ್ರಗಳಲ್ಲಿ ಶೌಚಾಲಯಗಳಿದ್ದು 141 ಕಟ್ಟಡಗಳಿಗೆ ಶೌಚಾಲಯದ ಅವಶ್ಯಕತೆಯಿರುತ್ತದೆ.

ಅ) ನಿವೇಶನ ಮತ್ತು ಅನುದಾನದ ಲಭ್ಯತೆಯ ಮೇರೆಗೆ ಹಂತ ಹಂತವಾಗಿ ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲಾಗುವುದು. ಶೌಚಾಲಯಗಳ ಅವಶ್ಯಕತೆ ಇರುವ ಕಡೆ ಸಂಪೂರ್ಣ ಸ್ವಚ್ಚತಾ ಆಂದೋಲನ ಕಾರ್ಯಕ್ರಮದಡಿ ಶೌಚಾಲಯ ನಿರ್ಮಿಸಲು ಕ್ರಮ ವಹಿಸಲಾಗುತ್ತಿದೆ.

ಇ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ 2009–10ನೇ ಸಾಲಿನಲ್ಲಿ ಇಲಾಖಾ ಅನುದಾನದಿಂದ 4 ಕಟ್ಟಡಗಳನ್ನು ನಿರ್ಮಿಸಲು ರೂ.2,00,000, ನಬಾರ್ಡ್ ಸಹಯೋಗದಿಂದ 1 ಕಟ್ಟಡ ನಿರ್ಮಿಸಲು ರೂ. 3,31,000. ಹಾಗೂ ವಿಶೇಷ ಅಭಿವೃದ್ಧಿ ಕಾರ್ಯಕ್ರಮದಡಿ 8 ಕಟ್ಟಡಗಳನ್ನು ನಿರ್ಮಿಸಲು ರೂ.28,80,000ಗಳನ್ನು, ಒಟ್ಟು ರೂ.34,11,000 ಮುಂದಿನ ವರ್ಷ 2010–11ಕ್ಕೆ ಅನುದಾನವನ್ನು ಕಾಯ್ದಿರಿಸಲಾಗಿದೆ.

ತಜ್ಞ ವೈದ್ಯರು ಮತ್ತು ಸಿಬ್ಬಂದಿ ವರ್ಗದವರ ಕೊರತೆ

471 (748) ಶ್ರೀ. ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು ಕೇಂದ್ರದ ಆಸ್ಪತ್ರೆಯಲ್ಲಿ ತಜ್ಞ ವೈದ್ಯರು, ಅರೆ ವೈದ್ಯಕೀಯ ಸಿಬ್ಬಂದಿ ಮತ್ತು ಗ್ರೂಪ್ 'ಡಿ' ನೌಕರರ ಖಾಲಿ ಹುದ್ದೆಗಳು ಎಷ್ಟು; ಖಾಲಿ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಏನು ಕ್ರಮ ತೆಗೆದುಕೊಂಡಿದೆ; ಇನ್ನೆಷ್ಟು ದಿನಗಳಲ್ಲಿ ಭರ್ತಿ ಮಾಡಲಾಗುವುದು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹುದ್ದೆಗಳು ಖಾಲಿ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆ, ವಿವರಗಳನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.